ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 123 ಡಿಬಿಎಂ 2020

ಕರ್ನಾಟಕ ಸರ್ಕಾರ ಸಚಿವಾಲಯ
ವಿಧಾನ ಸೌಧ
ಬೆಂಗಳೂರು, ದಿನಾಂಕ: 15.04.2020

## ಸುತ್ತೋಲೆ

1. ಕರ್ನಾಟಕ ರಾಜ್ಯದಲ್ಲಿ ಕೊರೊನಾ ವೈರಸ್ (ಕೋವಿಡ್-19) ಸಾಂಕ್ರಾಮಿಕವಾಗಿ ಹರಡುತ್ತಿರುವ ಹಿನ್ನೆಲೆಯಲ್ಲಿ ಸಚಿವಾಲಯ ಸೇರಿದಂತೆ ರಾಜ್ಯಮಟ್ಟದ ಕಛೇರಿಗಳಲ್ಲಿ ಹಾಗೂ ಕರ್ನಾಟಕ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಅತ್ಯಗತ್ಯ ಸೇವೆಗಳನ್ನು ಒದಗಿಸುತ್ತಿರುವ ಇಲಾಖೆಗಳಾದ 1) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ 2) ವೈದ್ಯಕೀಯ ಶಿಕ್ಷಣ ಇಲಾಖೆ 3) ಒಳಾಡಳಿತ ಇಲಾಖೆ 4) ಕಂದಾಯ ಇಲಾಖೆ 5) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ 6) ನಗರಾಭಿವೃದ್ಧಿ ಇಲಾಖೆ 7) ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ 8) ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ 9) ಸಾರಿಗೆ ಇಲಾಖೆ 10) ಇಂಧನ ಇಲಾಖೆ 11) ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ(ಇ-ಆಡಳಿತ) 12) ರಾಜ್ಯದಲ್ಲಿರುವ ಎಲ್ಲಾ ಖಜಾನೆಗಳನ್ನು ಸೇರಿದಂತೆ ಆರ್ಥಿಕ ಇಲಾಖೆ 13) ಪಶು ಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ 14) ಅರಣ್ಯ ಪರಿಸರ ಮತ್ತು ಜೀವಶಾಸ್ತ್ರ ಇಲಾಖೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಎಲ್ಲಾ ವರ್ಗದ ಅಧಿಕಾರಿ/ಸಿಬ್ಬಂದಿಗಳು ಕರ್ತವ್ಯಕ್ಕೆ ಹಾಜರಾಗತಕ್ಕದ್ದು. ಮೇಲ್ಕಾಣಿಸಿದ ಇಲಾಖೆಗಳನ್ನು ಹೊರತುಪಡಿಸಿ ಉಳಿದ ಇಲಾಖೆಗಳಲ್ಲಿ ಸರ್ಕಾರಿ ನಿಗಮ / ಮಂಡಳಿಗಳಲ್ಲಿ / ಪ್ರಾಧಿಕಾರಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಗ್ರೂಪ್-ಎ ವೃಂದದ ಎಲ್ಲಾ ಅಧಿಕಾರಿಗಳು ಕರ್ತವ್ಯಕ್ಕೆ ಹಾಜರಾಗುವಂತೆ ನಿರ್ದೇಶಿಸಲಾಗಿದೆ.

2. ದೃಷ್ಟಿಹೀನ ಹಾಗೂ ಇತರೆ ದೈಹಿಕ ಅಂಗವೈಕಲ್ಯ ಹೊಂದಿರುವ ಅಧಿಕಾರಿ/ಸಿಬ್ಬಂದಿಗಳು ಕಛೇರಿಗೆ ಹಾಜರಾಗುವುದರಿಂದ ವಿನಾಯಿತಿ ನೀಡಲಾಗಿದೆ.

3. ಈ ಸುತ್ತೋಲೆಯು ದಿನಾಂಕ:19.04.2020ರವರೆಗೆ ಅಸ್ತಿತ್ವದಲ್ಲಿರುತ್ತದೆ.

ಟಿವಿಜಯಭಾಸ್ಕರ್ 15/4/20
(ಟಿ.ಎಂ. ವಿಜಯಭಾಸ್ಕರ್)
ಮುಖ್ಯ ಕಾರ್ಯದರ್ಶಿಗಳು
ಕರ್ನಾಟಕ ಸರ್ಕಾರ

ರವರಿಗೆ:

1. ಸರ್ಕಾರದ ಎಲ್ಲಾ ಇಲಾಖೆಗಳ ಅಪರ ಮುಖ್ಯ ಕಾರ್ಯದರ್ಶಿಗಳು / ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿರವರುಗಳಿಗೆ.
2. ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ.
3. ಎಲ್ಲಾ ಜಿಲ್ಲಾಧಿಕಾರಿರವರುಗಳಿಗೆ.
4. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.